**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012**

**ಇ-ಮೇಲ್:commissioner.pue@gmail.com** **ಸ್ಥಿರದೂರವಾಣಿಸಂ:080-23562033**

ಸಂಖ್ಯೆ: **DPUE-EST10LAP/2/2026/2171280**

ದಿನಾಂಕ: 20-05-2026

## ಜ್ಞಾಪನ

ವಿಷಯ: 2026-27 ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರುಗಳ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಪಿ 37 ಡಿಜಿಡಿ 2026 ದಿನಾಂಕ: 19-05-2026.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 72 ಎಸ್‌ಟಿಬಿ 2016 ದಿನಾಂಕ: 04-07-2016.
3. ಜಿಲ್ಲಾ ಉಪ ನಿರ್ದೇಶಕರುಗಳಿಂದ ಬಂದ ವರದಿಗಳು.

-•-

ಉಲ್ಲೇಖಿತ (01) ರ ಸರ್ಕಾರದ ಆದೇಶದಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2025-26 ನೇ ಶೈಕ್ಷಣಿಕ ಸಾಲಿನ ಅವಧಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈ ಹಿಂದೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕ ಮಾಡಿಕೊಳ್ಳಲು ಸಹಮತಿ ನೀಡಿರುವ ಅತಿಥಿ ಉಪನ್ಯಾಸಕರ ಹುದ್ದೆಗಳನ್ನು ಮಾತ್ರ ಪರಿಗಣಿಸಿ 2026-27ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡಿ ಆದೇಶಿಸಲಾಗಿದೆ.

ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕ ಮಾಡಿಕೊಳ್ಳ ಬೇಕಾದ ಒಟ್ಟು ಅತಿಥಿ ಉಪನ್ಯಾಸಕರ ಸಂಖ್ಯೆಯ ಮಾಹಿತಿಯನ್ನು ಉಲ್ಲೇಖ (03) ರ ಪತ್ರಗಳಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು ಮಾಹಿತಿ ಒದಗಿಸಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ ಇಡಿ 72 ಎಸ್‌ಟಿಬಿ 2016 ದಿನಾಂಕ: 04-07-2016 ರಲ್ಲಿ ನಿಗದಿಪಡಿಸಿರುವ ಷರತ್ತಿಗೊಳಪಟ್ಟು ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2026-27 ನೇ ಶೈಕ್ಷಣಿಕ ಸಾಲಿನ ಅವಧಿಗೆ ಒಟ್ಟು 5910 ಅತಿಥಿ ಉಪನ್ಯಾಸಕರನ್ನು ಈ ಕೆಳಗಿನ ತಖ್ತೆಯಲ್ಲಿ ಸೂಚಿಸಿರುವ ಸಂಖ್ಯೆಗೆ ಅನುಗುಣವಾಗಿ ನೇಮಕಾತಿ ಮಾಡಿಕೊಂಡ ದಿನಾಂಕದಿಂದ 10 ತಿಂಗಳ ಅವಧಿಗೆ ಮಾತ್ರ (ಶೈಕ್ಷಣಿಕ ವರ್ಷದ ಅಂತ್ಯಕ್ಕೆ ಸೀಮಿತಗೊಳಿಸಿ) ನೇಮಕ ಮಾಡಿಕೊಳ್ಳಲು ಅನುಮತಿ ನೀಡಿದೆ.

2026-27 ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ: 2202-02-109-0-13-324 Honorarium ರಡಿ ಗೌರವಧನ ಪಾವತಿಗಾಗಿ ಒದಗಿಸಿರುವ ಅನುದಾನದಿಂದ ಭರಿಸುವುದು. ಈಗ ಇಲಾಖೆಯಿಂದ ಅನುಮತಿ ನೀಡಲಾಗಿರುವ ಸಂಖ್ಯೆಗೆ ಅನುಗುಣವಾಗಿ ಮಾತ್ರ ನೇಮಕ ಮಾಡಿಕೊಳ್ಳತಕ್ಕದ್ದು. ಹೆಚ್ಚುವರಿ ನೇಮಕಾತಿಗೆ ಯಾವುದೇ ಪ್ರಸ್ತಾವನೆ ಸಲ್ಲಿಸತಕ್ಕದ್ದಲ್ಲ ಎಂದು ಈ ಮೂಲಕ ತಿಳಿಸಿದೆ. ಜಿಲ್ಲಾವಾರು ಅನುಮತಿ ನೀಡಲಾದ ಅತಿಥಿ ಉಪನ್ಯಾಸಕರ ಸಂಖ್ಯೆ ಈ ಕೆಳಗಿನಂತಿದೆ.

| ಕ್ರ ಸಂ | ಜಿಲ್ಲೆ | ಅನುಮತಿಸಲಾದ ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|
| 1. | ಬೆಂಗಳೂರು ಉತ್ತರ | 40 |
| 2. | ಬೆಂಗಳೂರು ದಕ್ಷಿಣ | 44 |
| 3. | ಬೆಂಗಳೂರು ಗ್ರಾಮಾಂತರ | 58 |
| 4. | ರಾಮನಗರ | 133 |

Scanned with OKEN Scanner

| | | |
|---|---|---|
| 5. | ಬಳ್ಳಾರಿ | 238 |
| 6. | ಚಿಕ್ಕೋಡಿ | 254 |
| 7. | ಬೆಳಗಾವಿ | 203 |
| 8. | ಬಾಗಲಕೋಟೆ | 311 |
| 9. | ವಿಜಯಪುರ | 239 |
| 10. | ಬೀದರ್ | 75 |
| 11. | ದಾವಣಗೆರೆ | 79 |
| 12. | ಚಿತ್ರದುರ್ಗ | 151 |
| 13. | ಚಿಕ್ಕಮಗಳೂರು | 200 |
| 14. | ಗದಗ | 231 |
| 15. | ಹಾವೇರಿ | 151 |
| 16. | ಧಾರವಾಡ | 161 |
| 17. | ಕಲಬುರಗಿ | 153 |
| 18. | ಯಾದಗಿರಿ | 132 |
| 19. | ಹಾಸನ | 314 |
| 20. | ಚಿಕ್ಕಬಳ್ಳಾಪುರ | 172 |
| 21. | ಕೋಲಾರ | 180 |
| 22. | ಚಾಮರಾಜನಗರ | 160 |
| 23. | ಮೈಸೂರು | 292 |
| 24. | ಮಂಡ್ಯ | 171 |
| 25. | ಉತ್ತರ ಕನ್ನಡ | 307 |
| 26. | ಕೊಪ್ಪಳ | 225 |
| 27. | ರಾಯಚೂರು | 173 |
| 28. | ದಕ್ಷಿಣ ಕನ್ನಡ | 305 |
| 29. | ಉಡುಪಿ | 200 |
| 30. | ಶಿವಮೊಗ್ಗ | 165 |
| 31. | ತುಮಕೂರು | 295 |
| 32. | ಕೊಡಗು | 98 |
| | **ಒಟ್ಟು** | **5910** |

ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವಾಗ ಈ ಕೆಳಕಂಡ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ನೇಮಕ ಮಾಡಿಕೊಳ್ಳಲು ಸೂಚಿಸಿದೆ.

1. ಉಪನ್ಯಾಸಕರ ನೇಮಕಾತಿ ಕುರಿತು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳನ್ನು ಮಾತ್ರ ಅತಿಥಿ ಉಪನ್ಯಾಸಕರಾಗಿ ನೇಮಕ ಮಾಡಿಕೊಳ್ಳುವುದು.
2. ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ, ಕಡಿಮೆ ಕಾರ್ಯಭಾರ ಹೊಂದಿರುವ ವಿಷಯಗಳ ಉಪನ್ಯಾಸಕರನ್ನು ಜಿಲ್ಲೆಯ ಇತರೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನಿಯೋಜಿಸಿದ ನಂತರ ಉಳಿಕೆ ಹುದ್ದೆಗಳಿಗೆ ಮಾತ್ರ ಅತಿಥಿ ಉಪನ್ಯಾಸಕರನ್ನು ನೇಮಿಸುವುದು.
3. ಉಪನ್ಯಾಸಕರೇ ಇಲ್ಲದಿರುವ ಕಡೆ ಹಾಗೂ ನಿಯೋಜನೆಯಂತಹ ಬದಲಿ ವ್ಯವಸ್ಥೆ ಮಾಡಲು ಸಾಧ್ಯವಿಲ್ಲದಿರುವ ಕಡೆ ಮಾತ್ರ ಅತಿಥಿ ಉಪನ್ಯಾಸಕರನ್ನು ಉಪಯೋಗಿಸಿಕೊಳ್ಳಬಹುದು.
4. ಪ್ರತಿ ಅತಿಥಿ ಉಪನ್ಯಾಸಕರಿಗೆ ವಾರದಲ್ಲಿ ಗರಿಷ್ಠ 10/12 ಗಂಟೆಗಳ ಕಾರ್ಯಭಾರವನ್ನು ಮಾತ್ರ ನಿರ್ವಹಿಸಲು ಅನುಮತಿ ನೀಡಬಹುದು.
5. ಯಾವುದೇ ಕಾಲೇಜಿನಲ್ಲಿ ಪ್ರತಿ ವಿಷಯದಲ್ಲಿ ವಾರದಲ್ಲಿ 10/12 ಗಂಟೆಗಳಿಗಿಂತ ಹೆಚ್ಚು ಕಾರ್ಯಭಾರವಿದ್ದಲ್ಲಿ ಇಬ್ಬರು ಅತಿಥಿ ಉಪನ್ಯಾಸಕರನ್ನು ಉಪಯೋಗಿಸಿಕೊಳ್ಳಬಹುದು.

Scanned with OKEN Scanner

6. ಈ ಅತಿಥಿ ಉಪನ್ಯಾಸಕರ ಸೇವೆಯನ್ನು ಖಾಯಂ ಉಪನ್ಯಾಸಕರ ನೇಮಕಾತಿ/ವರ್ಗಾವಣೆ/ನಿಯೋಜನೆ ಆಗುವವರೆಗೆ ಅಥವಾ 2026-27 ನೇ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಬಳಸಿಕೊಳ್ಳತಕ್ಕದ್ದು.
7. ಸರ್ಕಾರದ ನಿಯಮಗಳಲ್ಲಿ ಈ ಅವಧಿಯಲ್ಲಿ ಖಾಯಂ ಉಪನ್ಯಾಸಕರು ನೇಮಕಾತಿ / ವರ್ಗಾವಣೆ / ನಿಯೋಜನೆ ಹೊಂದಿ ಕರ್ತವ್ಯಕ್ಕೆ ಹಾಜರಾದ ತಕ್ಷಣದಿಂದ ಅತಿಥಿ ಉಪನ್ಯಾಸಕರ ಕಾರ್ಯ ನಿರ್ವಹಣೆಯು ತಂತಾನೆ ರದ್ದಾಗುತ್ತದೆ.
8. ಪ್ರಾಚಾರ್ಯರ ಬೋಧನಾ ವಿಷಯವೇ ಇರುವ ಹುದ್ದೆ ಖಾಲಿ ಇದ್ದಲ್ಲಿ, ಅಂತಹ ಹುದ್ದೆಯ ಕಾರ್ಯಭಾರವು ವಾರದಲ್ಲಿ 10 ಗಂಟೆಗೆ ಮೀರದಿದ್ದಲ್ಲಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸುವಂತಿಲ್ಲ.
9. ಆಯಾ ವಿಷಯದಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸಲು ಒಬ್ಬರಿಗಿಂತ ಹೆಚ್ಚು ವ್ಯಕ್ತಿಗಳು ಮುಂದೆ ಬಂದಲ್ಲಿ ಅಂತಹವರ ಪೈಕಿ ಸ್ನಾತಕೋತ್ತರ ಪದವಿಯಲ್ಲಿ ಹೆಚ್ಚಿನ ಅಂಕ ಪಡೆದವರನ್ನು ಆಯಾ ಕಾಲೇಜಿನ ಪ್ರಾಚಾರ್ಯರು ಹಾಗೂ ಕಾಲೇಜಿನ ಹಿರಿಯ ಉಪನ್ಯಾಸಕರು ಇರುವ ಸಮಿತಿಯ ಮೂಲಕ ಆಯ್ಕೆ ಮಾಡತಕ್ಕದ್ದು.
10. ಅತಿಥಿ ಉಪನ್ಯಾಸಕರಿಗೆ ನೀಡುವ ಗೌರವಧನವನ್ನು ಲೆಕ್ಕ ಶೀರ್ಷಿಕೆ "2202-02-109-0-13-324 (ಗೌರವಧನ)" ಇದರಡಿ ಭರಿಸುವುದು. ಯಾವುದೇ ಇತರೆ ಮೂಲಗಳಿಂದ ಅತಿಥಿ ಉಪನ್ಯಾಸಕರಿಗೆ ಗೌರವ ಸಂಭಾವನೆಯನ್ನು ಪಾವತಿಸಿ ಇಲಾಖೆಯಿಂದ ಬಿಡುಗಡೆ ಮಾಡಲಾಗುವ ಅನುದಾನವನ್ನು ಮರು ಹೊಂದಾಣಿಕೆ ಮಾಡಿರುವ ಕುರಿತು ಯಾವುದೇ ದೂರುಗಳು ಸ್ವೀಕೃತವಾದಲ್ಲಿ ಇಲಾಖೆಯು ಅಂತಹವರ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮಜರುಗಿಸಲಾಗುವುದು.
11. ಆಯಾ ಶೈಕ್ಷಣಿಕ ವರ್ಷಗಳಲ್ಲಿ ಬಿಡುಗಡೆಯಾಗುವ ಅತಿಥಿ ಉಪನ್ಯಾಸಕರ ಗೌರವ ಸಂಭಾವನೆಯನ್ನು ಆಯಾ ಆರ್ಥಿಕ ವರ್ಷದೊಳಗೆ ಸೆಳೆಯುವಂತೆ ಸೂಚಿಸಿದೆ. ಆಯಾ ಆರ್ಥಿಕ ವರ್ಷದಲ್ಲಿ ಸೆಳೆಯದೇ ಅನುದಾನ ವ್ಯಾಪಗತವಾಗಿ ಮುಂದಿನ ಆರ್ಥಿಕ ವರ್ಷದಲ್ಲಿ ಹೆಚ್ಚುವರಿ ಅನುದಾನ ಕೋರಲು ಅವಕಾಶವಿರುವುದಿಲ್ಲ.
12. ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಬಳಸಿಕೊಳ್ಳುವಾಗ ಅವರಿಗೆ ಸಕ್ಷಮ ಪ್ರಾಧಿಕಾರದ ಆದೇಶವಿಲ್ಲದೆ ಯಾವುದೇ ಆದೇಶವನ್ನು ನೀಡಬಾರದು. ಇವರ ಹೆಸರುಗಳನ್ನು ಖಾಯಂ ಸಿಬ್ಬಂದಿಯ ಹಾಜರಾತಿ ವಹಿಯಲ್ಲಿ ನಮೂದಿಸಬಾರದು. ಗೌರವಧನ ವಿತರಿಸಿದ್ದಕ್ಕೆ ಅವರಿಂದ ಸೂಕ್ತ ರಸೀದಿಯನ್ನು ಪಡೆದುಕೊಳ್ಳುವುದು.
13. ಈ ರೀತಿ ನೇಮಕ ಮಾಡಿಕೊಂಡ ಉಪನ್ಯಾಸಕರಿಗೆ ಯಾವುದೇ ರೀತಿಯ ಸೇವಾ ಪ್ರಮಾಣ ಪತ್ರ ನೀಡಬಾರದು ಹಾಗೂ ಸೇವಾ ಪುಸ್ತಕ ತೆರೆಯಬಾರದು. ಅಲ್ಲದೆ ಹಾಜರಾತಿಯನ್ನು ಪ್ರತ್ಯೇಕವಾಗಿ ಪ್ರಾಚಾರ್ಯರೇ ನಿರ್ವಹಿಸತಕ್ಕದ್ದು.
14. ಯಾವುದೇ ಸರ್ಕಾರಿ/ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ/ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಅತಿಥಿ ಉಪನ್ಯಾಸಕರಾಗಿ ನೇಮಿಸಿಕೊಳ್ಳತಕ್ಕದ್ದಲ್ಲ. ಈ ರೀತಿ ಆಯ್ಕೆಯಾಗುವ ಅತಿಥಿ ಉಪನ್ಯಾಸಕರು, ಅತಿಥಿ ಉಪನ್ಯಾಸಕರಾಗಿ ಸಲ್ಲಿಸುವ ಸೇವೆಯು ಇತರೆ ಯಾವುದೇ ಸರ್ಕಾರಿ ಸೇವಾ ಸಕ್ರಮಾತಿಗೆ ಪರಿಗಣಿಸತಕ್ಕದ್ದಲ್ಲ.
15. ದೀರ್ಘಾವಧಿ ರಜೆಯಿಂದ ಉಂಟಾಗುವ ಖಾಲಿ ಹುದ್ದೆಗೆ ಅಥವಾ ಅನಧಿಕೃತ ಗೈರು ಹಾಜರಿಯಿಂದ ಉಂಟಾಗುವ ಖಾಲಿ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಬಾರದು.
16. ನೇಮಕ ಮಾಡಿಕೊಂಡ ಅತಿಥಿ ಉಪನ್ಯಾಸಕರ ವಿವರಗಳನ್ನು ಮಾತ್ರ ಕಡ್ಡಾಯವಾಗಿ ಜಿಲ್ಲಾ ಉಪನಿರ್ದೇಶಕರಿಗೆ ಕಳುಹಿಸತಕ್ಕದ್ದು. ಈ ಕಚೇರಿಗೆ ಯಾವುದೇ ಅಡಕಗಳನ್ನು ಕಳುಹಿಸಕೂಡದು.
17. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರುಗಳನ್ನು ಜಿಲ್ಲೆಯ ಅವಶ್ಯಕ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರ

Scanned with OKEN Scanner

ಸರಿದೂಗಿಸಲು ತಿಳಿಸಿದೆ. ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಸದರಿ ಮಾಹಿತಿಯನ್ನು ಜಿಲ್ಲಾ ಉಪನಿರ್ದೇಶಕರುಗಳಿಗೆ ಒದಗಿಸತಕ್ಕದ್ದು.

18. ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರುಗಳನ್ನು ಬೇರೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಸರಿದೂಗಿಸಲು ಸಾಧ್ಯವಿಲ್ಲದ ಪಕ್ಷದಲ್ಲಿ ಅಂತಹ ಉಪನ್ಯಾಸಕರುಗಳ ಮಾಹಿತಿಯನ್ನು ಜಿಲ್ಲಾ ಉಪನಿರ್ದೇಶಕರು ಇಲಾಖೆಗೆ ತಪ್ಪದೇ ಸಲ್ಲಿಸತಕ್ಕದ್ದು.
19. ಕಡಿಮೆ ಕಾರ್ಯಭಾರವಿರುವ ವಿಷಯಗಳ ಉಪನ್ಯಾಸಕರುಗಳನ್ನು ಜಿಲ್ಲೆಯ ಅವಶ್ಯಕ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರ ಸರಿದೂರಿಸಲು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಮಾಹಿತಿಯನ್ನು ಜಿಲ್ಲಾ ಉಪನಿರ್ದೇಶಕರುಗಳಿಗೆ ಒದಗಿಸದಿದ್ದಲ್ಲಿ ಅಥವಾ ಅಂತಹ ವಿಷಯಗಳ ಉಪನ್ಯಾಸಕರನ್ನು ಜಿಲ್ಲಾ ಉಪನಿರ್ದೇಶಕರು ಕಾರ್ಯಭಾರ ಸರಿದೂಗಿಸಲು ಬಳಸಿಕೊಳ್ಳದೇ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು, ಅತಿಥಿ ಉಪನ್ಯಾಸಕರ ಗೌರವಧನವನ್ನು ದುರುಪಯೋಗ ಪಡಿಸಿಕೊಳ್ಳುವುದು ಕಂಡುಬಂದಲ್ಲಿ, ಅಂತಹ ಅಧಿಕಾರಿಗಳ ಮೇಲೆ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.
20. ಈ ಹಿಂದಿನ ಶೈಕ್ಷಣಿಕ ಸಾಲಿನಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವಾಗ ಸರ್ಕಾರದ ನಿಯಮಗಳನ್ನು ಹಾಗೂ ಇಲಾಖೆಯ ನಿರ್ದೇಶನವನ್ನು ಪಾಲಿಸದೇ, ಅಂದರೆ, ಕಾರ್ಯಭಾರವನ್ನು ಸರಿದೂಗಿಸದೇ ಅಥವಾ ಅವಶ್ಯಕತೆ ಇಲ್ಲದೇ ಇರುವ ಕಾಲೇಜುಗಳಿಗೂ ಸಹ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿ ಗೌರವಧನವನ್ನು ವಿತರಿಸಿರುವುದಾಗಿ ಗುರುತರವಾದ ಆಪಾದನೆಗಳನ್ನು/ದೂರುಗಳನ್ನು ಸ್ವೀಕೃತಗೊಂಡಿರುತ್ತದೆ. ಈ ಹಿನ್ನೆಲೆಯಲ್ಲಿ, ಸದರಿ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರದ ನಿಯಮ ಹಾಗೂ ಇಲಾಖೆಯ ನಿರ್ದೇಶನಗಳನ್ನು ಪಾಲಿಸಲು ಆದೇಶಿಸಿದೆ. ತಪ್ಪಿದಲ್ಲಿ, ಅಂತಹ ಜಿಲ್ಲಾ ಉಪನಿರ್ದೇಶಕರು/ಪ್ರಾಂಶುಪಾಲರ ಮೇಲೆ ನಿಯಮಾನುಸಾರ ಸರ್ಕಾರಕ್ಕೆ ಶಿಸ್ತುಕ್ರಮ ಜರುಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.

Digitally signed by
BHARATH
Date: 20-05-2026
20:37:36

ನಿರ್ದೇಶಕರು,
ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ).

ರವರಿಗೆ:

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು 560001 - ಮಾಹಿತಿಗಾಗಿ.
2. ಮಾನ್ಯ ನಿರ್ದೇಶಕರ ಆಪ್ತಶಾಖೆ, ಜಂಟಿ ನಿರ್ದೇಶಕರು(ಆ), ಉಪ ನಿರ್ದೇಶಕರು(ಆ) - ಮಾಹಿತಿಗಾಗಿ
3. ಲೆಕ್ಕಪತ್ರಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಮಲ್ಲೇಶ್ವರಂ, ಬೆಂಗಳೂರು.

Scanned with OKEN Scanner

4. ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ - ತಮ್ಮ ಜಿಲ್ಲೆಯಲ್ಲಿ ಪ್ರಾಚಾರ್ಯರುಗಳು ಮಾಡಿಕೊಂಡ ಅತಿಥಿ ಉಪನ್ಯಾಸಕರ ಕ್ರೋಢೀಕೃತ ವಿಷಯವಾರು ಸಂಖ್ಯೆ ವಿವರಗಳನ್ನು ಕಳುಹಿಸಿಕೊಡಲು ತಿಳಿಸಿದೆ.
5. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ನೇಮಕ ಮಾಡಿಕೊಂಡ ಅತಿಥಿ ಉಪನ್ಯಾಸಕರ ವಿವರಗಳನ್ನು (ಕೇಂದ್ರ ಕಚೇರಿಗೆ ಕಳುಹಿಸಕೂಡದು) ಜಿಲ್ಲಾ ಉಪ ನಿರ್ದೇಶಕರಿಗೆ ಮಾತ್ರ ತಪ್ಪದೇ ಕಳುಹಿಸಲು ತಿಳಿಸಿದೆ.
6. ಕಚೇರಿ / ಹೆಚ್ಚುವರಿ ಪ್ರತಿ.

Scanned with OKEN Scanner